ಕಾರ್ಯನಿರ್ವಹಿಸುತ್ತಿದೆ. ಹಾಗೂ ಬೀದರ್ ಜಿಲ್ಲೆಯಲ್ಲಿರುವ ಬಸವಕಲ್ಯಾಣ ತಾಲ್ಲೂಕಿನ ಘೋಟಲವಾಡಿ ಗ್ರಾಮದಲ್ಲಿ ಒಂದು ಪರಿಶಿಷ್ಟ ವರ್ಗದ ಆಶ್ರಮ ಶಾಲೆ ಇರುತ್ತದೆ.

ಆ) ಹೊಸ ಆಶ್ರಮ ಶಾಲೆಗಳನ್ನು ಮಂಜೂರು ಮಾಡುವ ಪ್ರಸ್ತಾಪ ಸರ್ಕಾರದ ಮುಂದೆ ಇರುವುದಿಲ್ಲ. ಭಾಲ್ಕಿ ಮತ್ತು ಬೀದರ್ ಗ್ರಾಮಗಳಲ್ಲಿ ಪರಿಶಿಷ್ಟ ವರ್ಗದ ಜನಾಂಗಕ್ಕೆ ಆಶ್ರಮ ಶಾಲೆ ಸ್ಥಾಪಿಸಲು ಸರ್ಕಾರದ ಪರಿಶೀಲನೆಯಲ್ಲಿದೆ.

ಇ) ಸದರಿ ಆಶ್ರಮ ಶಾಲೆಯು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವ್ಯಾಪ್ತಿಗೆ ಒಳಪಟ್ಟಿರುವುದಿಲ್ಲ. ಬಸವಕಲ್ಯಾಣ ಘೋಟಲವಾಡಿ/ ಬೇಡರವಾಡಿಯಲ್ಲಿರುವ ಆಶ್ರಮ ಶಾಲೆಗೆ ದಿನಾಂಕ: 17-8-2001ರಂದು ಮಂಜೂರಾಗಿದೆ. ಸದರಿ ಕಾಮಗಾರಿಗೆ ದಿನಾಂಕ: 25-2-2004 ರಂದು ಆಡಳಿತಾತ್ಮಕ ಮಂಜೂರಾತಿ ನೀಡಿರುತ್ತದೆ. ಅದುವರೆವಿಗೂ ರೂ. 71.51 ಲಕ್ಷಗಳು ಖರ್ಚಾಗಿರುತ್ತದೆ. ಸದರಿ ಕಟ್ಟಡಕ್ಕೆ ಕಿಟಕಿ, ಬಾಗಿಲು, ವಿದ್ಯುತ್ ಮತ್ತು ನೀರು ಸರಬರಾಜು ಕಾಮಗಾರಿ ಹಾಗೂ ಕಾಂಪೌಂಡ್ ಆಗಬೇಕಾಗಿದೆ.

ಈ) ಕಟ್ಟಡವು ಶಿಥಿಲ ವ್ಯವಸ್ಥೆಗೆ ಬಂದಿರುವುದು ಕಂಡು ಬರುವುದಿಲ್ಲ.

ಉ) ಮೆ: ಹಿಂದೂಸ್ಥಾನ್ ಸ್ಟೀಲ್ ವರ್ಕ್ಸ್ ಕನ್‌ಸ್ಟ್ರಕ್ಷನ್ ಲಿಮಿಟೆಡ್, ಬೆಂಗಳೂರು ರವರಿಗೆ ವಹಿಸಲಾಗಿದೆ. ಕಟ್ಟಡದಲ್ಲಿ ನ್ಯೂನತೆ ಕಂಡು ಬಂದಿಲ್ಲವಾದ ಕಾರಣ ಸಂಸ್ಥೆಯ ವಿರುದ್ಧ ಕ್ರಮ ತೆಗೆಯುವ ಪ್ರಶ್ನೆ ಉದ್ಭವಿಸುವುದಿಲ್ಲ.

ಊ) ಉದ್ಭವಿಸುವುದಿಲ್ಲ.

86 (196) ಶ್ರೀ ಮಲ್ಲಿಕಾರ್ಜುನ್ ಸಿದ್ರಾಮಪ್ಪ ಖೂಬಾ (ಬಸವಕಲ್ಯಾಣ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಬೀದರ್ ಜಿಲ್ಲಾ ಆಸ್ಪತ್ರೆ ಮತ್ತು ತಾಲ್ಲೂಕುಗಳಲ್ಲಿರುವ ಎಲ್ಲಾ ಆಸ್ಪತ್ರೆಗಳಿಗೆ ಮಂಜೂರಾಗಿರುವ ವೈದ್ಯರು ಹಾಗೂ ಇತರೆ ಸಿಬ್ಬಂದಿ ವರ್ಗದ ಸಂಖ್ಯೆ ಎಷ್ಟು;

ಆ) ಈ ಪೈಕಿ ಕಾರ್ಯನಿರ್ವಹಿಸುತ್ತಿರುವ ವೈದ್ಯರ ಹಾಗೂ ಇತರ ಸಿಬ್ಬಂದಿ ವರ್ಗದ ಸಂಖ್ಯೆ ಎಷ್ಟು;

ಇ) ಜಿಲ್ಲಾ ಆಸ್ಪತ್ರೆ ಹಾಗೂ ತಾಲ್ಲೂಕು ಆಸ್ಪತ್ರೆಗಳಲ್ಲಿ ಖಾಲಿ ಇರುವ ವೈದ್ಯ ಹಾಗೂ ಇತರ ಸಿಬ್ಬಂದಿ ವರ್ಗದ ಸಂಖ್ಯೆ ಎಷ್ಟು;

ಈ) ಎಷ್ಟು ದಿನಗಳಿಂದ ಈ ಹುದ್ದೆಗಳು ಖಾಲಿ ಇವೆ;

ಉ) ಸಾರ್ವಜನಿಕ ಹಿತದೃಷ್ಟಿಯಿಂದ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಯಾವ ಕ್ರಮಗಳನ್ನು ಕೈಗೊಳ್ಳುವುದು?

ಶ್ರೀ ಆರ್. ಅಶೋಕ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):

ಅ) ಬೀದರ್ ಜಿಲ್ಲಾ ಆಸ್ಪತ್ರೆಗಳಲ್ಲಿ 23 ವೈದ್ಯರು/ 248 ಇತರೆ ಸಿಬ್ಬಂದಿಗಳ ಹುದ್ದೆ ಮಂಜೂರಾಗಿರುತ್ತವೆ. ತಾಲ್ಲೂಕು ಆಸ್ಪತ್ರೆಗಳಲ್ಲಿ 40 ವೈದ್ಯರು/ 286 ಇತರೆ ಸಿಬ್ಬಂದಿಗಳ ಹುದ್ದೆ ಮಂಜೂರಾಗಿರುತ್ತವೆ.

ಆ) ಜಿಲ್ಲಾ ಆಸ್ಪತ್ರೆಗಳಲ್ಲಿ 22 ವೈದ್ಯರು/ 172 ಇತರೆ ಸಿಬ್ಬಂದಿಗಳು ಕರ್ತವ್ಯ ನಿರ್ವಹಿಸುತ್ತಿದ್ದಾರೆ. ತಾಲ್ಲೂಕು ಆಸ್ಪತ್ರೆಗಳಲ್ಲಿ 23 ವೈದ್ಯರು/ 175 ಇತರೆ ಸಿಬ್ಬಂದಿಗಳು ಕರ್ತವ್ಯ ನಿರ್ವಹಿಸುತ್ತಿದ್ದಾರೆ.

ಇ) ಜಿಲ್ಲಾ ಆಸ್ಪತ್ರೆಯಲ್ಲಿ 1 ವೈದ್ಯರ /76 ಇತರೆ ಸಿಬ್ಬಂದಿಗಳ ಹುದ್ದೆ ಖಾಲಿ ಇರುತ್ತದೆ. ತಾಲ್ಲೂಕು ಆಸ್ಪತ್ರೆಗಳಲ್ಲಿ 17 ವೈದ್ಯರ/ 111 ಇತರೆ ಸಿಬ್ಬಂದಿಗಳ ಹುದ್ದೆ ಖಾಲಿ ಇರುತ್ತದೆ.

ಈ) ಸುಮಾರು ಎರಡು ವರ್ಷಗಳಿಂದ ಖಾಲಿ ಇರುತ್ತವೆ.

ಉ) ಖಾಲಿ ಇರುವ ವೈದ್ಯರ ಹುದ್ದೆಗಳನ್ನು ಗುತ್ತಿಗೆ ಆಧಾರದ ಮೇಲೆ ನೇಮಕ ಮಾಡಲು ಜಿಲ್ಲಾಧಿಕಾರಿಗಳಿಗೆ ಅಧಿಕಾರ ನೀಡಲಾಗಿದೆ. ಹಾಗೂ ನೇರ ಸಂದರ್ಶನ ಮುಖಾಂತರ ಗುತ್ತಿಗೆ ಆಧಾರದ ಮೇಲೆ ನೇಮಕ ಮಾಡಿಕೊಳ್ಳಲು ಕ್ರಮ ಕೈಗೊಳ್ಳಲಾಗಿದೆ. ವಿಶೇಷ ನೇರ ನೇಮಕಾತಿ ಸಮಿತಿ ಮುಖಾಂತರ ವೈದ್ಯೇತರ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗುತ್ತಿದೆ.

87 (197) ಶ್ರೀ ಮಲ್ಲಿಕಾರ್ಜುನ ಸಿದ್ರಾಮಪ್ಪ ಖೂಬಾ (ಬಸವಕಲ್ಯಾಣ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಬೀದರ್ ಜಿಲ್ಲಾ ಆಸ್ಪತ್ರೆ ಹಾಗೂ ಜಿಲ್ಲೆಯ ವಿವಿಧ ತಾಲ್ಲೂಕುಗಳಲ್ಲಿ ತರುವ ಸಾರ್ವಜನಿಕ ಆಸ್ಪತ್ರೆಗಳಲ್ಲಿ ರೋಗಿಗಳಿಗೆ ತೀವ್ರವಾದ ಔಷಧಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಮೇಲ್ಕಂಡ ಆಸ್ಪತ್ರೆಗಳಲ್ಲಿ ಔಷಧಗಳ ಸಲುವಾಗಿ ಕಳೆದ 3 ವರ್ಷಗಳಿಂದ ವೆಚ್ಚ ಮಾಡಿದ ಹಣವೆಷ್ಟು; (ಪೂರ್ಣ ಅಂಕಿ ಅಂಶಗಳ ವಿವರಗಳನ್ನು ವಿಧಾನ ಸಭಾ ಕ್ಷೇತ್ರವಾರು ಒದಗಿಸುವುದು)

ಇ) ಜಿಲ್ಲಾ ಮತ್ತು ತಾಲ್ಲೂಕು ಆಸ್ಪತ್ರೆಗಳಲ್ಲಿ ಸಾಕಷ್ಟು ಔಷಧಿಗಳ ದಾಸ್ತಾನಿದ್ದರೂ ಸಹ ವೈದ್ಯಕೀಯ ರೋಗಿಗಳಿಗೆ ಔಷಧಿಗಳನ್ನು ಹೊರಗಿನ ಖಾಸಗಿ ಅಂಗಡಿಗಳಿಂದ ಖರೀದಿಸುವಂತೆ ಸೂಚಿಸುತ್ತಿರುವುದು ನಿಜವೇ;

ಈ) ಹಾಗಿದ್ದಲ್ಲಿ, ಸರ್ಕಾರ ಈ ಬಗ್ಗೆ ಯಾವ ಕ್ರಮ ಕೈಗೊಳ್ಳುವುದು?

ಶ್ರೀ ಆರ್. ಅಶೋಕ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು): ಅ) ಔಷಧಗಳ ಕೊರತೆಯ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿರುತ್ತದೆ.

ಈ ಕೊರತೆ ನೀಗಿಸಲು ಸರ್ಕಾರ ನಿಗದಿಪಡಿಸಿರುವ ಮೊತ್ತದ ಔಷಧಗಳಲ್ಲದೇ, ಹೆಚ್ಚುವರಿ ಮೊತ್ತದ ಔಷಧಗಳನ್ನು ಸಹ ಸರಬರಾಜು ಮಾಡಲಾಗಿದೆ.

ಆ) ಪೂರ್ಣ ಅಂಕಿ ಅಂಶಗಳ ಪಟ್ಟಿಯನ್ನು ಲಗತ್ತಿಸಿದೆ.

ಇ) ಇಲಾಖೆಯ ಆರ್.ಸಿ. ಪಟ್ಟಿಯಲ್ಲಿ ಮತ್ತು ಗೋದಾಮಿನಲ್ಲಿ ಇಲ್ಲದ ಅತ್ಯವಾಶ್ಯಕವಾಗಿ ಬೇಕಾದ ಔಷಧಿಗಳನ್ನು ಮಾತ್ರ ಹೊರಗಿನಿಂದ ಖರೀದಿಸುವಂತೆ ವೈದ್ಯರು ರೋಗಿಗಳಿಗೆ ಸೂಚಿಸುತ್ತಿರುವುದು ಸರಿಯಾಗಿರುತ್ತದೆ.

ಈ) ಇನ್ನು ಮುಂದೆ ಔಷಧಗಳ ಕೊರತೆ ಉಂಟಾಗದಂತೆ ಕ್ರಮ ಕೈಗೊಳ್ಳಲಾಗುವುದು.